10) **ದೇಹದಾರ್ಢ್ಯತೆ ಪರೀಕ್ಷೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆ (Physical Standard Test & Physical Fitness Test):**

ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗಳ ದಿನಾಂಕವನ್ನು ನಂತರ ಜಾಹೀರಾತು ಪಡಿಸಲಾಗುವುದು ಹಾಗೂ ಇಲಾಖೆಯ ವೆಬ್‌ಸೈಟ್ "http:// www.ksp.gov.in"ನಲ್ಲಿ ಪ್ರಕಟಿಸಲಾಗುವುದು. ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆಪತ್ರಗಳನ್ನು ಇಲಾಖೆಯ ವೆಬ್‌ಸೈಟ್‌ನಿಂದ ಅಭ್ಯರ್ಥಿಗಳು ಕಡ್ಡಾಯವಾಗಿ ಅಂತರ್ಜಾಲದ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಪರೀಕ್ಷೆಗಳಿಗೆ ಪ್ರವೇಶ ನೀಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಅಧಿಕೃತ ವೆಬ್‌ಸೈಟ್ "http://www.ksp.gov.in" ಅನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.

10.1) ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆಯನ್ನು ನೇಮಕಾತಿ ಪ್ರಾಧಿಕಾರ ನಿಗದಿಪಡಿಸಿದ ಕೇಂದ್ರಗಳಲ್ಲಿ ನಡೆಸಲಾಗುವುದು.ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್‌ನ್ನು ದಿನನಿತ್ಯ ನೋಡಲು ತಿಳಿಸಲಾಗಿದೆ.

10.2) ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.

10.3) ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಹಾಜರಾಗುವಾಗ ಹುದ್ದೆಗಳಿಗೆ ನಿಗದಿಪಡಿಸಿದ ಮೂಲ ದಾಖಲಾತಿಗಳು ಮತ್ತು ಮೀಸಲಾತಿ ಕೋರಿರುವ ಮೂಲ ದಾಖಲಾತಿಗಳೊಂದಿಗೆ ಹಾಜರಾಗತಕ್ಕದ್ದು.

10.4) **ಅಭ್ಯರ್ಥಿಗಳು ದೇಹದಾರ್ಢ್ಯತೆ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಈಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.**

10.4.1) ಪಾಸ್‌ಪೋರ್ಟ್ (Passport)

10.4.2) ಚಾಲನಾ ಪರವಾನಗಿ ಪತ್ರ (Driving License)

10.4.3) ಪ್ಯಾನ್ ಕಾರ್ಡ್ (PAN Card)

10.4.4) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ(Service IDCard)

10.4.5) ಸಾರ್ವಜನಿಕ ಬ್ಯಾಂಕುಗಳು/ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ(Bank Pass Book with Photograph)

10.4.6) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattasand registered deeds with Photograph)

10.4.7) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ(Caste Certificate with Photo).

10.4.8) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿಯಾಗಿರುವ ಆದೇಶ (Ex-servicemen's pension book/pension payment order)

10.4.9) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ.(Job cards with Photograph).

10.4.10) ಎಲೆಕ್ಟೋರಲ್ ಫೋಟೋ ಗುರುತಿನ ಚೀಟಿ (EPIC).

10.4.11) ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್(AADHAR CARD).

10.5) ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು. ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗಧಿತದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಅನರ್ಹಗೊಳಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.

10.6) **ದೇಹದಾರ್ಢ್ಯತೆ (Physical Standard Test):**

ಅರ್ಜಿದಾರನು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ (ವೃಂದ ಮತ್ತು ನೇಮಕಾತಿ) ನಿಯಮಗಳು2013 ರಲ್ಲಿನ ಅಪೆಂಡಿಕ್ಸ್–"ಎ" ಯಲ್ಲಿರುವಂತೆ ಈ ಕೆಳಕಂಡ ದೇಹದಾರ್ಢ್ಯತೆ ಮತ್ತು ದೈಹಿಕ ಸಾಮರ್ಥ್ಯಗಳನ್ನು ಹೊಂದಿರಬೇಕು.

**ಅಪೆಂಡಿಕ್ಸ್(ಎ) ದೇಹದಾರ್ಢ್ಯತೆ ಪರೀಕ್ಷೆ**

| | | |
|---|---|---|
| 1 | ಎತ್ತರ | ಕನಿಷ್ಠ 168 ಸೆಂ.ಮೀ. |
| 2 | ಎದೆ ಸುತ್ತಳತೆ | ಕನಿಷ್ಠ 81 ಸೆಂ.ಮೀ ವಿಸ್ತಾರಗೊಂಡ ನಂತರ ಕನಿಷ್ಠ 5 ಸೆಂ.ಮೀ ಅಂದರೆ 86 ಸೆಂ.ಮೀ ಗೆ ಕಡಿಮೆ ಇಲ್ಲದಂತೆ. |

| | | |
|---|---|---|
| 3 | ತೂಕ | ಕನಿಷ್ಠ 50 ಕೆ.ಜಿ. |
| 4 | ಅನರ್ಹತೆಗಳು | ಬಾಗಿದ ಕಾಲು, ತಾಗು ಮಂಡಿ, ಚಪ್ಪಟೆ ಪಾದ ಹೊಂದಿದ ಅಭ್ಯರ್ಥಿಗಳು ಅನರ್ಹರಾಗುವರು. |

## 11) ದೈಹಿಕ ಸಾಮರ್ಥ್ಯ ಪರೀಕ್ಷೆ (Physical Fitness Test):

11.1) ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಈ ಕೆಳಕಂಡ ದೈಹಿಕ ಸಾಮರ್ಥ್ಯ ಪರೀಕ್ಷೆಗಳನ್ನು ನಡೆಸಲಾಗುವುದು.

| ಅಂಶಗಳು | ಅರ್ಹತಾ ವೇಳೆ/ದೂರ | |
|---|---|---|
| | ಸಾಮಾನ್ಯ ಅಭ್ಯರ್ಥಿಗಳಿಗೆ | ಮಾಜಿ ಸೈನಿಕ ಅಭ್ಯರ್ಥಿಗಳಿಗೆ |
| 100 ಮೀಟರ್ ಓಟ | 15 ಸೆಕೆಂಡ್‌ಗಳಲ್ಲಿ | 20 ಸೆಕೆಂಡ್‌ಗಳಲ್ಲಿ |
| 100 ಮೀಟರ್ ಓಟ ಬೆನ್ನಿನಲ್ಲಿ 22 ಕೆ.ಜಿ ಭಾರದೊಂದಿಗೆ | 25 ಸೆಕೆಂಡ್‌ಗಳಲ್ಲಿ | 32 ಸೆಕೆಂಡ್‌ಗಳಲ್ಲಿ |
| 22 ಕೆ.ಜಿ ಭಾರವನ್ನು ಬೆನ್ನಿನಲ್ಲಿ ಹೊತ್ತು 20 ಅಡಿ ಎತ್ತರದ ವರಗೆ ಏಣಿ ಹತ್ತುವುದು. | 20 ಸೆಕೆಂಡ್‌ಗಳಲ್ಲಿ | 25 ಸೆಕೆಂಡ್‌ಗಳಲ್ಲಿ |
| ಗುಂಡು ಎಸೆತ(7.26 ಕಿಲೋ) (ಸಾಮಾನ್ಯ ಅಭ್ಯರ್ಥಿಗಳಿಗೆ) | ಕನಿಷ್ಠ 5.60 ಮೀಟರ್, ಮೂರು ಪ್ರಯತ್ನಗಳಲ್ಲಿ | |
| ಗುಂಡು ಎಸೆತ(4 ಕಿಲೋ) (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | ಕನಿಷ್ಟ 3.75 ಮೀಟರ್, ಮೂರು ಪ್ರಯತ್ನಗಳಲ್ಲಿ |
| 800 ಮೀಟರ್ ಓಟ (ಸಾಮಾನ್ಯ ಅಭ್ಯರ್ಥಿಗಳಿಗೆ) | 2 ನಿಮಿಷ 50 ಸೆಕೆಂಡಗಳಲ್ಲಿ | |
| 400 ಮೀಟರ್ ಓಟ (ಮಾಜಿ ಸೈನಿಕ ಅಭ್ಯರ್ಥಿಗಳಿಗೆ) | | 2 ನಿಮಿಷ 50 ಸೆಕೆಂಡ್‌ಗಳಲ್ಲಿ |

11.2) **ಟಿಪ್ಪಣಿ:-**

11.2.1) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಅರ್ಹಗೊಳ್ಳಲು, ಮೇಲಿನ 5 ದೈಹಿಕ ಸಾಮರ್ಥ್ಯ ಪರೀಕ್ಷೆಗಳ ಪೈಕಿ ಕನಿಷ್ಠ 3 ರಲ್ಲಿ ಉತ್ತೀರ್ಣರಾಗಬೇಕು ಹಾಗೂ ಗೈರು ಹಾಜರಾದ ಅಭ್ಯರ್ಥಿಗಳು ಅನರ್ಹಗೊಳ್ಳುವರು.

11.2.2) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಕೇವಲ ಅರ್ಹತೆಗಾಗಿ ನಡೆಸಲಾಗುವುದು. ಈ ಪರೀಕ್ಷೆಗೆ ಯಾವುದೇ ಅಂಕಗಳನ್ನು ನೀಡಲಾಗುವುದಿಲ್ಲ.

11.2.3) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಬೆಂಗಳೂರಿನಲ್ಲಿ ನಡೆಸಲಾಗುವುದು.

11.2.4) ಒಂದು ವೇಳೆ ಯಾವುದೇ ತಪ್ಪು /ಸುಳ್ಳು ಮಾಹಿತಿ ನೀಡಿದ್ದಲ್ಲಿ ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು.

11.2.5) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹರಾದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆ ನಡೆಸಲಾಗುವುದು.

11.2.6) ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು.

11.2.7) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯಪರೀಕ್ಷೆಯನ್ನು ನಡೆಸುವಾಗ ಅಭ್ಯರ್ಥಿಗಳಿಗೆ ಉಂಟಾಗಬಹುದಾದ ಊನ, ಪೆಟ್ಟು, ಅಥವಾ ಯಾವುದೇ ರೀತಿಯ ಅಪಘಾತಗಳಿಗೆ ಇಲಾಖೆಯು ಜವಾಬ್ದಾರಿಯಾಗಿರುವುದಿಲ್ಲ.

**11.3) ವಿಶೇಷ ಸೂಚನೆ :-**

ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಹಾಜರಾಗುವ ಮುನ್ನ ಅಭ್ಯರ್ಥಿಗಳು ದೈಹಿಕವಾಗಿ ಸದೃಢರಿರಬೇಕು. ಈ ಪರೀಕ್ಷೆಗಳ ಸಂದರ್ಭದಲ್ಲಿ ಸಂಭವಿಸುವ ಯಾವುದೇ ರೀತಿಯ ಅನಾಹುತ / ತೊಂದರೆಗಳಿಗೆ ಇಲಾಖೆ/ ನೇಮಕಾತಿ ಸಮಿತಿಯು ಜವಾಬ್ದಾರರಾಗಿರುವುದಿಲ್ಲ. ಅಭ್ಯರ್ಥಿಗಳು ಅವರ ಸ್ವಂತ ಹಿತದೃಷ್ಠಿಯಿಂದ ಅವರ ದೇಹದ ವೈದ್ಯಕೀಯ ಪರೀಕ್ಷೆಯನ್ನು ಮಾಡಿಸಿಕೊಂಡು, ಅಭ್ಯರ್ಥಿಯ ಆರೋಗ್ಯವು ಎಲ್ಲ ರೀತಿಯಿಂದಲೂ ಸದೃಢವಾಗಿದೆ ಎಂದು ಖಚಿತಪಡಿಸಿಕೊಂಡು ಇಲಾಖೆ ನಡೆಸುವ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಎಲ್ಲಾ ವಿಧದಿಂದಲೂ ಅರ್ಹನೆಂದು ಮುಂಚಿತವಾಗಿಯೇ ತಿಳಿದುಕೊಂಡು ಹಾಜರಾಗತಕ್ಕದ್ದು. ಈ ದಿಸೆಯಲ್ಲಿ ಕನಿಷ್ಟ ಒಂದು ತಿಂಗಳ ಮುಂಚೆಯಿಂದಲೇ ದೈಹಿಕ ಸಾಮರ್ಥ್ಯ ಪರೀಕ್ಷೆಗೆ ಅಭ್ಯರ್ಥಿಗಳು ಸಾಕಷ್ಟು ಅಭ್ಯಾಸ ಮಾಡಿಕೊಳ್ಳತಕ್ಕದ್ದು.

**ಟಿಪ್ಪಣಿ :**

11.3.1) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ಒಂದು ದೈಹಿಕ ಪರೀಕ್ಷೆಯ ಸಮಿತಿಯು ನಡೆಸುತ್ತದೆ. ಯಾವುದೇ

ಇತರೆ ವೈದ್ಯಕೀಯ ಪ್ರಮಾಣ ಪತ್ರದ ಆಧಾರದ ಮೇಲೆ ಪರಿಗಣಿಸಲಾಗುವುದಿಲ್ಲ. ದೈಹಿಕ ಪರೀಕ್ಷೆಯಲ್ಲಿ ಸಮಿತಿಯು ನೀಡುವ ಫಲಿತಾಂಶವೇ ಅಂತಿಮವಾಗಿರುತ್ತದೆ.

11.3.2) ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯಪರೀಕ್ಷೆ ಪೂರ್ಣಗೊಂಡ ನಂತರ ಅಭ್ಯರ್ಥಿಗಳು ದೈಹಿಕ ಪರೀಕ್ಷೆ ಸಮಿತಿಯ ಸಮ್ಮುಖದಲ್ಲಿ ನಿಗಧಿತನಮೂನೆಗೆ ಸಹಿ ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು. ಇಲ್ಲವಾದರೆ ಅಂತಹವರನ್ನು ಅನರ್ಹರೆಂದು ಪರಿಗಣಿಸಲಾಗುವುದು.

11.3.3) ಅಭ್ಯರ್ಥಿಗಳು ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯಲ್ಲಿ ಅರ್ಹಗೊಂಡಲ್ಲಿ ಮಾತ್ರ ಲಿಖಿತ ಪರೀಕ್ಷೆಗೆ ಅರ್ಹಗೊಳ್ಳುವರು.

11.3.4) ದೇಹದಾರ್ಢ್ಯತೆ ಪರೀಕ್ಷೆಯ ಎತ್ತರ ಹಾಗೂ ತೂಕವನ್ನು BMI (Body Mass Index machine)ಯಂತ್ರದಿಂದ ಪಡೆಯಲಾಗುವುದು.

11.3.5) ಪಾರದರ್ಶಕತೆಗಾಗಿ ಮೇಲೆ ಹೇಳಿದ ಎಲ್ಲಾ ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ವೀಡಿಯೋಗ್ರಾಫಿ ಮಾಡಲಾಗುವುದು.